# <u>ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು ಇವರನಡವಳಿಗಳು</u>

**ವಿಷಯ:** ಪಿಹೆಚ್.ಡಿ/ಎಂ.ಫಿಲ್ ಫೆಲೋಶಿಪ್ ಯೋಜನೆಯಡಿ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಫೆಲೋಶಿಪ್ ನೀಡಲು 2021-22ನೇ ಸಾಲಿನಲ್ಲಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 462 ಎಂಡಿಎಸ್ 2016, ದಿನಾಂಕ:24-01-2017
2. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 157 ಎಂಡಿಎಸ್ 2017, ದಿನಾಂಕ:09-05-2017
3. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 141 ಎಂಡಿಎಸ್ 2021, ದಿ: 15.04.2021.
4. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 159 ಎಂಡಿಎಸ್ 2021, ದಿ: 12.04.2021.
5. ಸರ್ಕಾಗದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 159 ಎಂಡಿಎಸ್ 2021, ದಿ.27.04.2021.

>>><<<

## <u>ಪ್ರಸ್ತಾವನೆ:-</u>

ಉಲ್ಲೇಖ (1), (2) & (3)ರ ಸರ್ಕಾರದ ಆದೇಶದಲ್ಲಿ ವಿಶ್ವವಿದ್ಯಾಲಯಗಳಲ್ಲಿ ಪಿ.ಹೆಚ್.ಡಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ 3 ವರ್ಷ ಮತ್ತು ಎಂ.ಫಿಲ್ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಜೆ.ಆರ್.ಎಫ್ ಮಾದರಿಯಲ್ಲಿ 2 ವರ್ಷಗಳ ಅವಧಿಗೆ ಮಾತ್ರ ಪ್ರತಿ ಮಾಹೆಯಾನ ರೂ 25,000/- ಗಳನ್ನು ಮತ್ತು ಪ್ರತಿ ವರ್ಷಕ್ಕೆ ಒಂದು ಬಾರಿಗೆ ರೂ 10,000/-ಗಳ ನಿರ್ವಹಣಾ ವೆಚ್ಚವನ್ನು ಫೆಲೋಶಿಪ್ ಮೂಲಕ ನೀಡಲು ಆದೇಶಿಸಿದೆ.

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ 2020-21ನೇ ಸಾಲಿನಲ್ಲಿ ಚಾಲ್ತಿಯಲ್ಲಿದ್ದ ಯೋಜನಾ ಕಾರ್ಯಕ್ರಮಗಳನ್ನು 2021-22ನೇ ಆರ್ಥಿಕ ಸಾಲಿನಲ್ಲಿ ಮುಂದುವರೆಸಲು ಉಲ್ಲೇಖ (4)ರಲ್ಲಿ ಆದೇಶ ಹೊರಡಿಸಲಾಗಿದೆ. ಅದರಲ್ಲಿ "ಪಿಹೆಚ್.ಡಿ/ಎಂ.ಫಿಲ್ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಜೆ.ಆರ್.ಎಫ್ ಮಾದರಿಯಲ್ಲಿ ಫೆಲೋಶಿಪ್" ಕಾರ್ಯಕ್ರಮವು ಸಹ ಒಂದಾಗಿರುತ್ತದೆ. 2021-22ನೇ ಸಾಲಿನಲ್ಲಿ ಮಂಜೂರಾಗಿರುವ ಆಯವ್ಯಯದಲ್ಲಿ ಮೊದಲನೇ ತ್ರೈಮಾಸಿಕ ಕಂತಿನ ಅನುದಾನ ಬಿಡುಗಡೆ ಮಾಡಿ ಆದೇಶಿಸಿದೆ.

ಪಿಹೆಚ್.ಡಿ/ಎಂ.ಫಿಲ್ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಜೆ.ಆರ್.ಎಫ್ ಮಾದರಿಯಲ್ಲಿ ಫೆಲೋಶಿಪ್ ಕಾರ್ಯಕ್ರಮಕ್ಕಾಗಿ **ರೂ.678.30ಲಕ್ಷ (ರೂ.ಆರು ಕೋಟಿ ಎಪ್ಪತ್ತೆಂಟು ಲಕ್ಷದ ಮೂವತ್ತು ಸಾವಿರಗಳು ಮಾತ್ರ**)ಗಳನ್ನು ಅನುಬಂಧದಲ್ಲಿ ಸೂಚಿಸಿರುವಂತೆ <u>ಸಂಬಂಧಪಟ್ಟ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ</u> ರವರಿಗೆ ಮರು ಬಿಡುಗಡೆ ಮಾಡಬೇಕಾಗಿರುವುದರಿಂದ ಈ ಆದೇಶ.

# ಆದೇಶ

ಸಂಖ್ಯೆ:ಅಸಂನಿ/ಫೆಲೋಶಿಪ್/ಸಿಆರ್-03/2021-22, ದಿನಾಂಕ: 28.05.2021

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಪಿಹೆಚ್.ಡಿ/ಎಂ.ಫಿಲ್ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಅರ್ಹ ವಿದ್ಯಾರ್ಥಿಗಳಿಗೆ ಜೆ.ಆರ್.ಎಫ್ ಮಾದರಿಯಲ್ಲಿ ಫೆಲೋಶಿಪ್ ಅನುದಾನವನ್ನು ಬಿಡುಗಡೆ ಮಾಡಲು **ರೂ.678.30ಲಕ್ಷ (ರೂ. ಆರು ಕೋಟಿ ಎಪ್ಪತ್ತೆಂಟು ಲಕ್ಷದ ಮೂವತ್ತು ಸಾವಿರಗಳು ಮಾತ್ರ)**ಗಳನ್ನು ಅನುಬಂಧದಲ್ಲಿ ಸೂಚಿಸಿರುವಂತೆ ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರಿಗೆ ಈ ಕೆಳಕಂಡ ನಿಬಂಧನೆಗೊಳಪಟ್ಟು ಬಿಡುಗಡೆ ಮಾಡಲಾಗಿದೆ.

**ನಿಬಂಧನೆಗಳು:-**

1. ಉಲ್ಲೇಖಿತ ಸರ್ಕಾರಿ ಆದೇಶಗಳಲ್ಲಿ ನೀಡಲಾಗಿರುವ ಸೂಚನೆಗಳನ್ನು ಸದರಿ ಯೋಜನೆಗೆ ಅನುಷ್ಠಾನಗೊಳಿಸತಕ್ಕದ್ದು/ ವೆಚ್ಚಮಾಡುವುದು.
2. ಸ್ವೀಕೃತ ಅರ್ಜಿಗಳನ್ನು ಆಗಿಂದಾಗೆ ಹೊರಡಿಸಲಾಗಿರುವ ಆದೇಶ, ಸುತ್ತೋಲೆಗಳಲ್ಲಿ ನೀಡಿರುವ ಸೂಚನೆಗಳ/ಷರತ್ತುಗಳಂತೆ ಕೂಲಂಕುಶವಾಗಿ ಪರಿಶೀಲಿಸಿ ಅರ್ಹ ವಿದ್ಯಾರ್ಥಿಗಳಿಗೆ ಅನುದಾನ ನೀಡತಕ್ಕದ್ದು ಯಾವುದೇ ತಪ್ಪಾಗಿದ್ದಲ್ಲಿ ಮುಂದೆ ಆಗು ಹೋಗುಗಳಿಗೆ ನೇರವಾಗಿ ಜಿಲ್ಲೆಯ ಜಿಲ್ಲಾ ಅಲ್ಪಸಂಖ್ಯಾತರ ಅಧಿಕಾರಿಗಳು ರವರನ್ನು ಹೊಣೆಗಾರರನ್ನಾಗಿ ಮಾಡಲಾಗುವುದು.
3. ಬಿಡುಗಡೆ ಮಾಡಿರುವ ಮೊತ್ತಕ್ಕೆ ಸಂಬಂಧಿಸಿದ ವೆಚ್ಚದ ಬಳಕೆ ಪ್ರಮಾಣ ಪತ್ರವನ್ನು ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯಕ್ಕೆ ಸಲ್ಲಿಸುವುದು.
4. ದಾಖಲಾತಿಗಳನ್ನು ಸಲ್ಲಿಸಿರುವ "ವಿದ್ಯಾರ್ಥಿಗಳಿಗೆ ಒಂದು ವಾರದೊಳಗೆ ನಿಯಮಾನುಸಾರ ಅನುದಾನವನ್ನು ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಬಿಡುಗಡೆ ಮಾಡುವುದು.

ಪ್ರಸ್ತುತ ಬಿಡುಗಡೆ ಮಾಡಿರುವ ಮೊತ್ತವನ್ನು ಲೆಕ್ಕಶೀರ್ಷಿಕೆ 2225-04-277-0-04 ಆಬ್ಜೆಕ್ಟ್ ಕೋಡ್ (117) ಅಲ್ಪಸಂಖ್ಯಾತರಿಗೆ ವಿದ್ಯಾರ್ಥಿವೇತನ ಮತ್ತು ಶುಲ್ಕ ಮರುಪಾವತಿ, ರಾಜ್ಯ ವಲಯ ಯೋಜನೆಯಡಿ 2021-22 ಭರಿಸುವುದು.

ನಿರ್ದೇಶಕರು,
ಅಲ್ಪಸಂಖ್ಯಾತರ ನಿರ್ದೇಶನಾಲಯ,
ಬೆಂಗಳೂರು.

ಪ್ರತಿಯನ್ನು:-

1. ಕರ್ನಾಟಕ ಮಹಾಲೇಖಪಾಲರು, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು.
3. ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವೆಚ್ಚ-3, ಬೆಂಗಳೂರು.
4. ಖಜಾನೆ ಆಯುಕ್ತರು, ಖಜಾನೆ ಆಯುಕ್ತಾಲಯ, ಬೆಂಗಳೂರು.
5. ಎಲ್ಲಾ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ,
6. ಸಂಬಂಧಪಟ್ಟ ಉಪ-ನಿರ್ದೇಶಕರು/ಜಿಲ್ಲಾ ಖಜಾನಾಧಿಕಾರಿಗಳು
7. ಲೆಕ್ಕ ಪತ್ರ ಶಾಖೆ
8. ಕಛೇರಿ ಪ್ರತಿ
9. ಹೆಚ್ಚುವರಿ ಪ್ರತಿ.

# ಅಲ್ಪಸಂಖ್ಯಾತರ ನಿರ್ದೇಶನಾಲಯ

ಪಿಹೆಚ್.ಡಿ/ಎಂ.ಫಿಲ್ ಫೆಲೋಶಿಪ್ ಯೋಜನೆಯಡಿ ಅಲ್ಪಸಂಖ್ಯಾತರ ಅರ್ಹ ವಿದ್ಯಾರ್ಥಿಗಳಿಗೆ
2021-22ನೇ ಸಾಲಿನಲ್ಲಿ ಬಿಡುಗಡೆ ಮಾಡಿರುವ ಅನುದಾನದ ವಿವರ

ನಿರ್ದೇಶನಾಲಯದ ಆದೇಶ ಸಂಖ್ಯೆ:ಅಸಂನಿ/ಫೆಲೋಸಿಪ್/ಸಿಆರ್-03/2021-22
ದಿ:[illegible].2021ಕ್ಕೆ ಅನುಬಂಧ

(ರೂ ಲಕ್ಷಗಳಲ್ಲಿ)

| ಕ್ರ ಸಂ | ಜಿಲ್ಲೆ | ಬಿಡುಗಡೆಯಾದ ಅನುದಾನ | |
|---|---|---|---|
| | | ಭೌತಿಕ | ಆರ್ಥಿಕ |
| 1 | ಬೆಂಗಳೂರು(ನ) | 61 | 128.10 |
| 2 | ಬೆಂಗಳೂರು(ಗ್ರಾ) | 1 | 2.10 |
| 3 | ಬಾಗಲಕೋಟೆ | 6 | 12.60 |
| 4 | ಬೆಳಗಾವಿ | 15 | 31.50 |
| 5 | ಬಳ್ಳಾರಿ | 14 | 29.40 |
| 6 | ಬೀದರ್ | 6 | 12.60 |
| 7 | ವಿಜಯಪುರ | 22 | 46.20 |
| 8 | ಚಿತ್ರದುರ್ಗ | 1 | 2.10 |
| 9 | ಚಿಕ್ಕಬಳ್ಳಾಪುರ | 1 | 2.10 |
| 10 | ದಕ್ಷಿಣ ಕನ್ನಡ | 39 | 81.90 |
| 11 | ದಾವಣಗೆರೆ | 5 | 10.50 |
| 12 | ಧಾರವಾಡ | 57 | 119.70 |
| 13 | ಗದಗ | 1 | 2.10 |
| 14 | ಕಲಬುರಗಿ | 27 | 56.70 |
| 15 | ಹಾವೇರಿ | 1 | 2.10 |
| 16 | ಮಂಡ್ಯ | 1 | 2.10 |
| 17 | ಮೈಸೂರು | 29 | 60.90 |
| 18 | ರಾಯಚೂರು | 8 | 16.80 |
| 19 | ರಾಮನಗರ | 1 | 2.10 |
| 20 | ಶಿವಮೊಗ್ಗ | 15 | 31.50 |
| 21 | ತುಮಕೂರು | 5 | 10.50 |
| 22 | ಉತ್ತರ ಕನ್ನಡ | 1 | 2.10 |
| 23 | ಉಡುಪಿ | 6 | 12.60 |
| | ಒಟ್ಟು | 323 | 678.30 |

ನಿರ್ದೇಶಕರು
ಅಲ್ಪಸಂಖ್ಯಾತರ ನಿರ್ದೇಶನಾಲಯ
ಬೆಂಗಳೂರು